XI ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಆರ್. ವರ್ತೂರ್ ಪ್ರಕಾಶ್ ಜವಳಿ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮದ 619(ಎ)(2) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ.

XII. ಶ್ರೀ ಸಿ.ಪಿ. ಯೋಗೇಶ್ವರ್ (ಅರಣ್ಯ ಸಚಿವರು) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿಗಳ ಅಧಿನಿಯಮ 619(4)ರ ಮೇರೆಗೆ :

1. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

4. ವರದಿಯನ್ನು ಮಂಡಿಸುವುದು :

ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ) : ಮಾನ್ಯ ಅಧ್ಯಕ್ಷರೆ, ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಷ್ಟ್ರಾಧ್ಯಕ್ಷರು ಅಥವಾ ರಾಜ್ಯಪಾಲರಿಂದ ಸಂದರ್ಭಾನುಸಾರವಾಗಿ ಒಪ್ಪಿಗೆಯನ್ನು ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು. **(ಅನುಬಂಧ–II)**